# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 335 |
| 2 | ಸದಸ್ಯರ ಹೆಸರು | : | ಶ್ರೀ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 07-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ ತಡೆಯುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ; | ಅನಧಿಕೃತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್ ತಡೆಯುವುದು ನಿರಂತರ ಪ್ರಕ್ರಿಯೆಯಾಗಿದ್ದು, ಅನಧಿಕೃತ ಜಾಹೀರಾತು ಅಳವಡಿಸಿದ ತಕ್ಷಣ ಅಳವಡಿಸುವವರ ವಿರುದ್ಧ ನಿಯಮಾನುಸಾರ ಅಗತ್ಯ ಕ್ರಮವಹಿಸಿ ತೆರವುಗೊಳಿಸಿ ಅಂತವರ ಮೇಲೆ ಕರ್ನಾಟಕ ಮುಕ್ತ ಸ್ಥಳಗಳ (ವಿರೂಪಗೊಳಿಸುವಿಕೆ ತಡೆ) ಕಾಯ್ದೆ, 1981 ರ ಪ್ರಕಾರ ಎಫ್.ಐ.ಆರ್ ದಾಖಲಿಸಿ ದಂಡ ವಿಧಿಸಲು ಕ್ರಮ ವಹಿಸಲಾಗುತ್ತಿದೆ. ದಿನಾಂಕ:01.08.2024 ರಿಂದ 18.06.2025 ರವರೆಗೆ ಒಟ್ಟು 448 ಎಫ್.ಐ.ಆರ್‌ಗಳನ್ನು ದಾಖಲಿಸಲಾಗಿದೆ. |
| ಆ) | ಅನಧಿಕೃತ ಪ್ರಚಾರಗಳಿಂದ ಸಾರ್ವಜನಿಕರಿಗೆ ಹಾಗೂ ವ್ಯಾಪಾರಸ್ಥರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನಧಿಕೃತವಾಗಿ ಜಾಹೀರಾತು ಅಳವಡಿಸುತ್ತಿರುವುದು ಕಂಡುಬಂದ ತಕ್ಷಣವೇ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಅನಧಿಕೃತ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕುತ್ತಿರುವುದರ ಬಗ್ಗೆ ನಿರ್ಬಂಧಿಸಲು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ; | ಪಾಲಿಕೆಯ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ: ಸ.ಆ(ಜಾ)/ಪಿ.ಆರ್/2232-ಭಾ-1/2016-17 ರಂತೆ ದಿನಾಂಕ: 17-02-2020 ರೀತ್ಯಾ ಅಪರ / ಜಂಟಿ ಆಯುಕ್ತರು ರವರಿಗೆ ಜಾಹೀರಾತುಗಳಿಗೆ ಸಂಬಂಧಿಸಿದಂತೆ, ವಲಯ ವ್ಯಾಪ್ತಿಯ ಸಂಪೂರ್ಣ ನಿಯಂತ್ರಣ ಅಧಿಕಾರವನ್ನು ನೀಡಲಾಗಿರುತ್ತದೆ. |
| ಈ) | ನಿಯಮಬಾಹಿರವಾಗಿ ಬ್ಯಾನರ್, ಬಂಟಿಂಗ್ ಮತ್ತು ಫ್ಲೆಕ್ಸ್ ಅಳವಡಿಸಿದ್ದರೂ ಅವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯವಹಿಸಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; | ನಿಯಮ ಬಾಹಿರವಾಗಿ ಬ್ಯಾನರ್, ಬಂಟಿಂಗ್ಸ್ ಮತ್ತು ಫ್ಲೆಕ್ಸ್ ಅಳವಡಿಸಿದಾಗ ಅವುಗಳನ್ನು ತೆರವುಗೊಳಿಸಲು ಪಾಲಿಕೆಯ ಸಿಬ್ಬಂದಿ ತಮ್ಮ ದೈನಂದಿನ ಕಛೇರಿ ಕೆಲಸ ಕಾರ್ಯಗಳ ಜೊತೆಗೆ ತೆರವುಗೊಳಿಸುತ್ತಿರುತ್ತಾರೆ. ನಿರ್ಲಕ್ಷ್ಯವಹಿಸಿದ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಿ, ಎಚ್ಚರಿಕೆ ನೀಡಲಾಗಿದೆ. |
| ಉ) | ದಂಡದ ರೂಪದಲ್ಲಿ ಇದುವರೆಗೂ ಸರ್ಕಾರಕ್ಕೆ ಎಷ್ಟು ಹಣ ವಸೂಲಿ ಮಾಡಲಾಗಿದೆ? | ಇಲ್ಲಿಯವರೆಗೂ ಒಟ್ಟು ರೂ.9,22,850/- ದಂಡ ವಸೂಲಾತಿ ಮಾಡಲಾಗಿರುತ್ತದೆ. ದಿನಾಂಕ:01.08.2024 ರಿಂದ 18.06.2025 ರವರೆಗೆ ಒಟ್ಟು 448 ಎಫ್.ಐ.ಆರ್‌ಗಳನ್ನು ದಾಖಲಿಸಲಾಗಿದೆ. |

**ಸಂಖ್ಯೆ: ನಅಇ 295 ಎಂಎನ್‌ಯು 2025**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ